ವಿಷಯ : ಬೆಳಗಾಂ ಸರ್ಕಾರಿ ಪಾಲಿಟೆಕ್ನಿಕ್‌ನಲ್ಲಿ ಹೊಸ ಕೋರ್ಸಿನ ಪ್ರಾರಂಭ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 485 (753)

ಶ್ರೀ ಕೆ.ಸಿ.ಮೊದಗೀರಕರ ದೇಸಾಯಿ (ಹಿರೆಬಾಗೇವಾಡಿ) :- ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬೆಳಗಾಂ ಸರ್ಕಾರಿ ಪಾಲಿಟೆಕ್ನಿಕ್‌ನಲ್ಲಿ 1994-95ನೇ ಸಾಲಿನಲ್ಲಿ ಹೊಸ ಕೋರ್ಸ್‌ನ್ನು ಪ್ರಾರಂಭಿಸುವ ಪ್ರಸ್ತಾವನೆಯು ಇತ್ಯರ್ಥವಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಈ ಸಂಬಂಧವಾಗಿ ಸರ್ಕಾರ ಕೈಗೊಂಡಿರುವ ಕ್ರಮ :

ಇ) ಯಾವಾಗ ಕೋರ್ಸ್‌ನ್ನು ಪ್ರಾರಂಭಿಸಲಾಗುವುದು ?

ಶ್ರೀ. ಎಸ್. ಎಂ. ಯೂಹ್ಯಾ (ಉನ್ನತ ಶಿಕ್ಷಣ ಸಚಿವರು) :-

ಅ) ಹೌದು.

ಆ) ಸರ್ಕಾರದ ಪರಿಗಣನೆಯಲ್ಲಿದೆ.

ಇ) ಶೀಘ್ರದಲ್ಲಿಯೇ ಪ್ರಾರಂಭಿಸಲಾಗುವುದು.

ವಿಷಯ : ಬೆಂಗಳೂರು ನಗರದ ಶ್ರೀರಾಮಪುರದಲ್ಲಿ ಶ್ರೀ ವಿದ್ಯಾಸಂಸ್ಥೆಯಲ್ಲಿನ ವಿದ್ಯಾರ್ಥಿಗಳಿಗೆ ಅಗತ್ಯ ಸೌಲಭ್ಯಗಳನ್ನು ಕಲ್ಪಿಸುವ ಬಗ್ಗೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 487 (779)

ಶ್ರೀ ನಾರಾಯಣರಾವ್ ಮಲಹಳ್ಳಿ (ಬೀದರ್):- ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ನಗರದ ಶ್ರೀರಾಮಪುರಂ ಪ್ರದೇಶದ ಏ.ಡಿ. ಬ್ಲಾಕ್‌ನಲ್ಲಿರುವ ಶ್ರೀ ವಿದ್ಯಾಸಂಸ್ಥೆಯ ಪಾಠಶಾಲೆಗೆ ಯಾವಾಗ ಮಾನ್ಯತೆ ನೀಡಲಾಯಿತು ?

ಆ) ಈ ಶಾಲೆಯಲ್ಲಿ ವಿದ್ಯಾರ್ಥಿಗಳಿಗೆ ಸ್ವಂತ ಕ್ರೀಡಾಂಗಣ ವ್ಯವಸ್ಥೆ, ಕ್ರೀಡಾ ಸಾಮಾಗ್ರಿಗಳ ವ್ಯವಸ್ಥೆ ಹಾಗೂ ವಿಶಾಲವಾದ ತರಗತಿಗಳ ಕೊಠಡಿ ವ್ಯವಸ್ಥೆ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಹಾಗಿದ್ದಲ್ಲಿ ಮಾನ್ಯತೆ ನೀಡುವಾಗ ಸದರಿ ಅಂಶಗಳನ್ನು ಗಮನಿಸದೇ ಸರ್ಕಾರಿ ಆದೇಶವನ್ನು ಉಲ್ಲಂಘನೆ ಮಾಡಿರುವುದು ನಿಜವೇ ?

ಈ) ಹಾಗಿದ್ದಲ್ಲಿ ಸಂಬಂಧಪಟ್ಟವರ ಮೇಲೆ ಶಿಸ್ತಿನ ಕ್ರಮ ಕೈಗೊಳ್ಳುವ ಬಗ್ಗೆ ಪರಿಶೀಲಿಸಲಾಗುವುದೇ ?

ಶ್ರೀಮತಿ ನಾಗಮ್ಮ ಸಿ. ಕೇಶವಮೂರ್ತಿ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು):-

ಅ) ದಿನಾಂಕ 21-8-1970 ರಂದು ಮಾನ್ಯತೆ ನೀಡಲಾಯಿತು.

ಆ) - ಇಲ್ಲ - .

ಇ) - ಇಲ್ಲ -.

ಈ) ಪ್ರಶ್ನೆ ಉದ್ಭವಿಸುವುದಿಲ್ಲ.

ವಿಷಯ : ಸರ್ಕಾರಿ ಆಸ್ಪತ್ರೆಗಳಲ್ಲಿ ಔಷಧಿಗಳ ಕೊರತೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 488 (781) ಶ್ರೀ ಗುರುಪಾದಪ್ಪ ನಾಗಮಾರಪಳ್ಳಿ (ಔರಾದ್) :- ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1. ಸರ್ಕಾರಿ ಆಸ್ಪತ್ರೆಗಳಲ್ಲಿ ವಿಶೇಷವಾಗಿ ಗ್ರಾಮೀಣ ಪ್ರದೇಶದಲ್ಲಿರುವ ಆಸ್ಪತ್ರೆಗಳಲ್ಲಿ ಆರೋಗ್ಯ ಕೇಂದ್ರಗಳಲ್ಲಿ ಸಾಮಾನ್ಯ ಔಷಧಿಗಳು ಹಾಗೂ ಜೀವ ರಕ್ಷಕ ಔಷಧಿಗಳ ಕೊರತೆ ಇರುವುದು ನಿಜವೇ ?

2. ಹಾಗಿದ್ದಲ್ಲಿ ಎಷ್ಟು ಶೇಕಡ ಪ್ರಮಾಣದಲ್ಲಿ ಔಷಧಿಗಳ ಕೊರತೆ ಇದೆ.

3. ಈ ಕೊರತೆಯನ್ನು ನೀಗಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

ಡಾ ॥ ಎ. ಬಿ. ಮಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :-

1. ಇಲ್ಲ.

2. ಉದ್ಭವಿಸುವುದಿಲ್ಲ.

3. ಉದ್ಭವಿಸುವುದಿಲ್ಲ.

ವಿಷಯ : ಹುಬ್ಬಳ್ಳಿ ಕೆ. ಎಂ. ಸಿ. ಆಸ್ಪತ್ರೆಯಲ್ಲಿ ಸ್ಕ್ಯಾನಿಂಗ್ ಘಟಕ ತೆರೆಯುವ ಪ್ರಸ್ತಾವನೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 491 (492 (ಅ))

ಶ್ರೀ. .ಕೆ. ಹೆಚ್. ಕುರಡಗಿ (ಮುಂಡರಗಿ) :- ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹುಬ್ಬಳ್ಳಿ ಕೆ. ಎಂ. ಸಿ. ಆಸ್ಪತ್ರೆಯಲ್ಲಿ ಸ್ಕ್ಯಾನಿಂಗ್ ಘಟಕ ತೆಗೆಯುವ ಪ್ರಸ್ತಾವನೆ ಸರ್ಕಾರದ ಗಮನಕ್ಕೆ ಬಂದಿದೆಯೇ ?

ಆ) ಕ್ಷ-ಕಿರಣ ಮತ್ತು ಸ್ಕ್ಯಾನಿಂಗ್ ಯಂತ್ರಗಳು ದುರಸ್ತಿಯಾಗಿದೆಯೇ ?